**1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ.ರವರ ನ್ಯಾಯಾಲಯ, ತರೀಕೆರೆ.**

## ಕ್ರಿಮಿನಲ್ ಮೊಕದ್ದಮೆ ಸಂಖ್ಯೆ 26/2024

ಪಿರ್ಯಾದಿ ಃ ರಾಜ್ಯದ ಪರವಾಗಿ ಲಕ್ಕವಳ್ಳಿ ಪೊಲೀಸರು

- ವಿರುದ್ಧ -

ಆರೋಪಿ/ತರು ಃ

1) ಪ್ರವೀಣ ಬಿನ್ ತಿಮ್ಮಣ್ಣ, 19 ವರ್ಷ, ಕೂಲಿಕೆಲಸ, ವಾಸಃ ಕರಕುಚ್ಚಿ ಎ-ಕಾಲೋನಿ ಗ್ರಾಮ, ಲಕ್ಕವಳ್ಳಿ ಹೋಬಳಿ, ತರೀಕೆರೆ ತಾಲ್ಲೂಕು, ಚಿಕ್ಕಮಗಳರು ಜಿಲ್ಲೆ.
2) ಹರೀಶ ಬಿನ್ ಮೂರ್ತಿ, 25 ವರ್ಷ, ಕೂಲಿಕೆಲಸ, ವಾಸಃ ಸಂಕ್ಲಿಪುರ ಗ್ರಾಮ, ಹೊಸ ಸಿದ್ದಾಪುರ ಅಂಚೆ, ಭದ್ರಾವತಿ ತಾಲ್ಲೂಕು, ಶಿವಮೊಗ್ಗಜಿಲ್ಲೆ.

********

## ದೋಷಾರೋಪಣೆ

ಶ್ರೀಮತಿ ಉರ್ಮಿಳ.ವಿ., ಬಿ.ಎ.ಎಲ್, ಎಲ್.ಎಲ್.ಬಿ., 1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ., ತರೀಕೆರೆ ಆದ ನಾನು ಆರೋಪಿತರಾದ ನಿಮ್ಮ ವಿರುದ್ಧ ಮಾಡುವ ದೋಷಾರೋಪಣೆಗಳೇನೆಂದರೆಃ-

ದಿನಾಂಕ 24.04.2023 ರಂದು ರಾತ್ರಿ 11.30 ಗಂಟೆಯ ಸಮಯದಲ್ಲಿ ಲಕ್ಕವಳ್ಳಿ ಪೊಲೀಸ್ ಠಾಣಾ ಸರಹದ್ದಿನಲ್ಲಿ, ಕರಕಕುಚ್ಚಿ ಎ-ಕಾಲೋನಿ ಗ್ರಾಮದ ವಾಸಿಯಾದ ಚಾಸಾ-1 ಮಂಜುನಾಥ್ ಬಿನ್ ಚಂದಪ್ಪರವರ ಮನೆಯ ಮುಂಭಾಗದ ರಸ್ತೆಯಲ್ಲಿ ಆರೋಪಿತರಾದ ನೀವು ಕೆಎ14/ಬಿ-4824 ಬುಲೆರೋ ಪಿಕಪ್ ವಾಹನದ ಟೈರ್ ಗಳನ್ನು ಬಿಚ್ಚಲು ಪ್ರಯತ್ನಿಸುತ್ತಿದ್ದು, ಇದನ್ನು ಪ್ರಶ್ನಿಸಿದ ಚಾಸಾ-1 ರವರಿಗೆ ಆರೋಪಿತರಾದ ನೀವು ಸಮಾನ ಉದ್ದೇಶದಿಂದ ಲೋಫರ್ ಸೂಳೆಮಗನೆ, ಬೋಳಿಮಗನೆ ಎಂದು ಅವಾಚ್ಯವಾಗಿ ಶಬ್ದಗಳಿಂದ ಬೈದು ಅವಮಾನ ಮಾಡಿದ್ದು, ಆದಕಾರಣ ಆರೋಪಿತರಾದ ನೀವು ಭಾರತೀಯ ದಂಡ ಸಂಹಿತೆ ಕಲಂ 504 ಸಹವಾಚಕ ಕಲಂ 34 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದೊಳಗೆ ಮಾಡಿರುವಿರಿ.

ಎರಡನೇಯದಾಗಿ ಅದೇ ದಿನ, ಅದೇ ಸಮಯ ಹಾಗೂ ಅದೇ ಸ್ಥಳದಲ್ಲಿ, ಆರೋಪಿತರಾದ ನೀವು ಸಮಾನ ಉದ್ದೇಶದಿಂದ, ಆರೋಪಿಯಾದ ನೀವು ಚಾಸಾ-1 ರವರಿಗೆ ಕಬ್ಬಿಣದ ಪೈಪಿನಿಂದ ಮತ್ತು ದೊಣ್ಣೆಯಿಂದ ಹಲ್ಲೆ ಮಾಡಿ ಹಾಗೂ 2 ನೇ ಆರೋಪಿಯಾದ ನೀವು ಚಾಸಾ-1 ರವರಿಗೆ ಕಲ್ಲಿನಿಂದ ಹೊಡೆದು, ಚಾಸಾ-1 ರವರಿಗೆ ಸಾಮಾನ್ಯ ಸ್ವರೂಪದ ಗಾಯಗಳನ್ನುಂಟು ಮಾಡಿದ್ದು, ಆದಕಾರಣ ಆರೋಪಿತರಾದ

ನೀವು ಭಾರತೀಯ ದಂಡ ಸಂಹಿತೆ ಕಲಂ 324 ಸಹವಾಚಕ ಕಲಂ 34 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದೊಳಗೆ ಮಾಡಿರುವಿರಿ.

ಮೂರನೇಯದಾಗಿ ಅದೇ ದಿನ, ಅದೇ ಸಮಯ ಹಾಗೂ ಅದೇ ಸ್ಥಳದಲ್ಲಿ, ಆರೋಪಿತರಾದ ನೀವು ಸಮಾನ ಉದ್ದೇಶದಿಂದ, ಜಗಳ ಬಿಡಿಸಲು ಬಂದ ಚಾಸಾ-4 ಲಕ್ಷ್ಮಮ್ಮರವರ ಕೈಯನ್ನು ಹಿಡಿದುಕೊಂಡು ಎಳೆದಾಡಿ ಅವರ ಮಾನಕ್ಕೆ ಧಕ್ಕೆಯನ್ನುಂಟು ಮಾಡಿದ್ದು, ಆದಕಾರಣ ಆರೋಪಿತರಾದ ನೀವು ಭಾರತೀಯ ದಂಡ ಸಂಹಿತೆ ಕಲಂ 354 ಸಹವಾಚಕ ಕಲಂ 34 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದೊಳಗೆ ಮಾಡಿರುವಿರಿ.

ನಾಲ್ಕನೇಯದಾಗಿ ಅದೇ ದಿನ, ಅದೇ ಸಮಯ ಹಾಗೂ ಅದೇ ಸ್ಥಳದಲ್ಲಿ, ಆರೋಪಿತರಾದ ನೀವು ಸಮಾನ ಉದ್ದೇಶದಿಂದ, ಚಾಸಾ-1 ರವರ ಮೈಕೈಗೆ ಕೈಗಳಿಂದ ಹೊಡೆದು ಹಾಗೂ ಬಿಡಿಸಲು ಬಂದ ಚಾಸಾ-4 ರವರ ಮುಖಕ್ಕೆ, ಬೆನ್ನಿಗೆ ಕೈಗಳಿಂದ ಹೊಡೆದು, ಚಾಸಾ-1 ಮತ್ತು 4 ರವರಿಗೆ ಸಾಮಾನ್ಯ ಸ್ವರೂಪದ ಗಾಯಗಳನ್ನುಂಟು ಮಾಡಿದ್ದು, ಆದಕಾರಣ ಆರೋಪಿತರಾದ ನೀವು ಭಾರತೀಯ ದಂಡ ಸಂಹಿತೆ ಕಲಂ 323 ಸಹವಾಚಕ ಕಲಂ 34 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದೊಳಗೆ ಮಾಡಿರುವಿರಿ.

ಕೊನೆಯದಾಗಿ ಅದೇ ದಿನ, ಅದೇ ಸಮಯ ಹಾಗೂ ಅದೇ ಸ್ಥಳದಲ್ಲಿ, ಆರೋಪಿತರಾದ ನೀವು ಸಮಾನ ಉದ್ದೇಶದಿಂದ, ಚಾಸಾ-1 ಮತ್ತು 4 ರವರಿಗೆ ಕೊಲೆ ಬೆದರಿಕೆ ಹಾಕಿದ್ದು, ಆದಕಾರಣ ಆರೋಪಿತರಾದ ನೀವು ಭಾರತೀಯ ದಂಡ ಸಂಹಿತೆ ಕಲಂ 506 ಸಹವಾಚಕ ಕಲಂ 34 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದೊಳಗೆ ಮಾಡಿರುವಿರಿ.

ನೀವು ಸದರಿ ಆರೋಪ ಮೇಲೆ ಈ ನ್ಯಾಯಾಲಯದಿಂದ ವಿಚಾರಣೆಗೆ ಗುರಿಯಾಗತಕ್ಕುದೆಂದು ನಾನು ಈ ಮೂಲಕ ನಿರ್ದೇಶಿಸುತ್ತೇನೆ.

ದಿನಾಂಕಃ 15.06.2026

ಸಹಿ

**(ಊರ್ಮಿಳ.ವಿ.)**

**1** ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು

ಮತ್ತು ಪ್ರ.ದ.ನ್ಯಾ.ದಂ., ತರೀಕೆರೆ.